**Akashvani : Bangalore**
**Regional Bulletin In Kannada**
**09.11.2025 / 2.30 pm**
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ
**09.11.2025 / 2.30 pm**
**<><*<><>*><>**

ಮುಖ್ಯಾಂಶಗಳು

೧. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರಿಂದ ಶ್ರವಣಬೆಳಗೊಳದ ನಾಲ್ಕನೇಬೆಟ್ಟ ಪದನಾಮ ಅನಾವರಣ-ಮೇಲುಕೋಟೆಯಲ್ಲಿ ಚೆಲುವ ನಾರಾಯಣಸ್ವಾಮಿ ದರ್ಶನ

೨. ವಿಜಯನಗರದಲ್ಲಿಂದು ೭೪ ಕೆರೆ ತುಂಬಿಸುವ ಯೋಜನೆಗೆ ಮುಖ್ಯಮಂತ್ರಿ ಸಿದ್ಧರಾಮಯ್ಯ ಚಾಲನೆ

೩. ವಿಜಯಪುರದ ಜಿಲ್ಲಾಸ್ಪತ್ರೆಯಲ್ಲಿ ತಾಯಿ ಹಾಲು ಸಂಗ್ರಹಣಾ ಕೇಂದ್ರ ಲೋಕಾರ್ಪಣೆಗೊಳಿಸಿದ ಸಚಿವ ಎಂ.ಬಿ.ಪಾಟೀಲ್

೪. ಮೈಸೂರಿನ ಸರಗೂರಿನಲ್ಲಿ ಅರಣ್ಯ ಇಲಾಖೆ ಅಧಿಕಾರಿಗಳಿಂದ ನರಭಕ್ಷಕ ಗಂಡು ಹುಲಿ ಸೆರೆ

೫. ಬೆಳಗಾವಿಯ ಬೈಲಹೊಂಗಲದಲ್ಲಿ ಕಬ್ಬು ಬೆಳೆಗಾರರ ಪ್ರತಿಭಟನೆ - ಪ್ರತಿ ಟನ್ ಗೆ ೩ ಸಾವಿರದ ೫೦೦ ರೂಪಾಯಿ ನೀಡುವಂತೆ ಆಗ್ರಹ

****************

ರಾಜ್ಯ ಪ್ರವಾಸದಲ್ಲಿರುವ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಇಂದು ಹಾಸನ ಜಿಲ್ಲೆಯ ಚನ್ನರಾಯಪಟ್ಟಣ ತಾಲೂಕಿನ ಜೈನಕಾಶಿ ವಿಶ್ವವಿಖ್ಯಾತ ಶ್ರವಣಬೆಳಗೊಳದಲ್ಲಿ ನಾಲ್ಕನೇ ಬೆಟ್ಟ ಪದನಾಮ ಅನಾವರಣ ಹಾಗೂ ಶಾಂತಿಸಾಗರ ಮಹಾರಾಜರ ಪ್ರತಿಮೆ ಅನಾವರಣ ಕಾರ್ಯಕ್ರಮ ನೆರವೇರಿಸಿದರು. ಜೈನ ಮುನಿ ೧೦೮ನೇ ಶಾಂತಿಸಾಗರ ಮಹಾರಾಜರ ಸಮಾಧಿ ಸ್ಥಳದ ನಾಲ್ಕನೇ ಬೆಟ್ಟಕ್ಕೆ ಶಾಂತಿಗಿರಿ ಎಂದು ನಾಮಕರಣ ಮಾಡಿದರು. ಬಳಿಕ ಶಾಂತಿಸಾಗರ ಮಹಾರಾಜರ ಬೃಹತ್ ಶಿಲಾಶಾಸವನ್ನು ಅನಾವರಣಗೊಳಿಸಿದರು.

ಬಳಿಕ ಮಾತನಾಡಿದ ಉಪರಾಷ್ಟ್ರಪತಿ, ಶಾಂತಿ ಸಾಮರಸ್ಯದ ನಾಡಾಗಿರುವ ಶ್ರವಣಬೆಳಗೊಳಕ್ಕೆ ಬಂದಿರುವುದು ಖುಷಿ ತಂದಿದೆ. ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕನ್ನಡಕ್ಕೆ ಶಾಸ್ತ್ರೀಯ ಸ್ಥಾನಮಾನ ನೀಡಲಾಗಿz. ಮುಂದಿನ ದಿನಗಳಲ್ಲಿ ಕನ್ನಡ ಭಾಷೆಯ ಉನ್ನತಿಗೆ ಇನ್ನಷ್ಟು ಒತ್ತು ನೀಡಲಾಗುವುದು ಎಂದು ತಿಳಿಸಿದರು.

ಧ್ವನಿ : ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್

ಜೈನಮಠದ ಚಾರುಕೀರ್ತಿ ಪಂಡಿತಾಚಾರ್ಯವರ್ಯ ಭಟ್ಟಾರಕ ಪಟ್ಟಾಚಾರ್ಯವರ್ಯ ಶ್ರೀಗಳ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ, ಸಚಿವರಾದ ಕೃಷ್ಣಭೈರೇಗೌಡ, ಸುಧಾಕರ್, ಭಾಗಿಯಾಗಿದ್ದರು.

***************

ಬಳಿಕ ಉಪರಾಷ್ಟ್ರಪತಿ ಸಿ.ಪಿರಾಧಾಕೃಷ್ಣನ್ ಅವರು, ಮಂಡ್ಯ ಜಿಲ್ಲೆಯ ಮೇಲುಕೋಟೆಗೆ ಆಗಮಿಸಿ ಚೆಲುವ ನಾರಾಯಣಸ್ವಾಮಿ ದೇವರ ದರ್ಶನ ಪಡೆದರು. ಸೇನಾ ಹೆಲಿಕ್ಯಾಪ್ಟರ್ ನಲ್ಲಿ ಆಗಮಿಸಿದ ಉಪರಾಷ್ಟ್ರಪತಿಗಳನ್ನು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಕೇಂದ್ರ ಉಕ್ಕು ಹಾಗೂ ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ.ಕುಮಾರಸ್ವಾಮಿ, ಜಿಲ್ಲಾ ಉಸ್ತುವಾರಿ ಸಚಿವ ಎನ್. ಚೆಲುವರಾಯಸ್ವಾಮಿ ಸ್ವಾಗತಿಸಿದರು. ಈ ವೇಳೆ ದೇವಾಲಯದ ಆಡಳಿತ ಮಂಡಳಿ ಸದಸ್ಯರು ಪೂರ್ಣಕುಂಭ ಸ್ವಾಗತ ನೀಡಿ ಬರಮಾಡಿಕೊಂಡರು.

***************

ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ವಿಜಯನಗರ ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ. ಕೂಡ್ಲಿಗಿಯಲ್ಲಿ ೭೪ ಕೆರೆಗಳಿಗೆ ನೀರು ತುಂಬಿಸುವ ಯೋಜನೆಗಳ ಲೋಕಾರ್ಪಣೆ ಹಾಗೂ ವಿವಿಧ ಕಾಮಗಾರಿಗಳ ಉದ್ಘಾಟನೆ ಶಂಕುಸ್ಥಾಪನೆ ಮತ್ತು ಫಲಾನುಭವಿಗಳಿಗೆ ವಿವಿಧ ಇಲಾಖೆಗಳ ಸವಲತ್ತುಗಳ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. ಕಾರ್ಮಿಕ ಇಲಾಖೆ, ಕೃಷಿ ಇಲಾಖೆ, ಉನ್ನತ ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆ ಸೇರಿದಂತೆ ಒಟ್ಟು ೪೫೬.೫೧ ಕೋಟಿ ಕಾಮಗರಿಗಳಿಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

***************

ವಿಜಯಪುರದಲ್ಲಿ ಮೊಟ್ಟ ಮೊದಲ ಬಾರಿಗೆ ಜಿಲ್ಲಾ ಆಸ್ಪತ್ರೆಯ ಮಕ್ಕಳ ಘಟಕದಲ್ಲಿ ತಾಯಿ ಹಾಲು ಸಂಗ್ರಹಣ ಕೇಂದ್ರ ಸ್ಥಾಪಿಸಲಾಗಿದೆ. ಅವಧಿ ಪೂರ್ವ ನವಜಾತ ಶಿಶುಗಳ ಮರಣ ಪ್ರಮಾಣ ಕಡಿಮೆ ಮಾಡಲು ಹಾಗೂ ಮಕ್ಕಳ ಆರೋಗ್ಯ ವೃದ್ದಿಗೆ ಈ ಕೇಂದ್ರ ಅತ್ಯಂತ ಸಹಕಾರಿಯಾಗಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ್ ತಿಳಿಸಿದ್ದಾರೆ. ಜಿಲ್ಲಾಸ್ಪತ್ರೆಯ ಎಂಸಿಎಚ್ ವಿಭಾಗದಲ್ಲಿ ಆಶ್ರಯ ಹಸ್ತ ಫೌಂಡೇಶನನ್ ೨ ಕೋಟಿ ೬೦ ಲಕ್ಷ ರೂಪಾಯಿ ಸಿಎಸ್ಆರ್ ಅನುದಾನದಲ್ಲಿ ಸ್ಥಾಪಿಸಲಾದ ಧಾತ್ರಿ ಸಮಗ್ರ ಹಾಲುಣಿಸುವಿಕೆಯ ನಿರ್ವಹಣಾ ಕೇಂದ್ರ ಹಾಗೂ ಮದರ್ ಮಿಲ್ಕ್ ಬ್ಯಾಂಕ್ ಉದ್ಘಾಟಿಸಿ ಅವರು ಮಾತನಾಡಿದರು. ಪ್ರತಿ ಮಗುವಿಗೆ ತಾಯಿ ಹಾಲು ದೊರೆಯಬೇಕೆಂಬ ಸದುದ್ದೇಶದೊಂದಿಗೆ ಸ್ಥಾಪಿಸಲಾದ ಈ ಹಾಲುಣಿಸುವಿಕೆ ನಿರ್ವಹಣಾ ಕೇಂದ್ರವನ್ನು ಹೈದ್ರಾಬಾದ್‌ನ ಸುಶೇನಾ ಹೆಲ್ತ್ ಫೌಂಡೇಶನ್ ನಿರ್ವಹಣೆ ಮಾಡಲಿದೆ. ಕಡಿಮೆ ತೂಕದ ಶಿಶುಗಳು ಜನಿಸಿದಲ್ಲಿ, ಶಸ್ತ್ರಚಿಕಿತ್ಸೆಗೆ ಒಳಗಾದ ನವಜಾತ ಶಿಶುಗಳನ್ನು ಸದೃಡವಾಗಿ ಬೆಳೆಸುವ ಗುರಿಯನ್ನು ಹೊಂದಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಮೈಸೂರು ಜಿಲ್ಲೆಯ ಸರಗೂರು ತಾಲೂಕಿನಲ್ಲಿ ಪದೇ ಪದೆ ಜನರ ಮೇಲೆ ದಾಳಿ ಮಾಡಿ ಜನ, ಜಾನುವಾರುಗಳ ಸಾವಿಗೆ ಕಾರಣವಾಗಿದ್ದ ಗಂಡು ಹುಲಿಯನ್ನು ಸೆರೆ ಹಿಡಿಯಲಾಗಿದೆ. ಕಳೆದ ಒಂದು ತಿಂಗಳ ಅವಧಿಯಲ್ಲಿ ಮೂವರ ಮೇಲೆ ದಾಳಿ ಮಾಡಿ, ಅವರ ಸಾವಿಗೆ ಕಾರಣವಾಗಿದ್ದ ಹುಲಿಯನ್ನು ಅರಣ್ಯ ಇಲಾಖೆ ಅಧಿಕಾರಿಗಳು ಸೆರೆಹಿಡಿದಿದ್ದಾರೆ. ಮೃತ ವ್ಯಕ್ತಿಗಳ ಮರಣೋತ್ತರ ಪರೀಕ್ಷೆಯ ವರದಿ ಮತ್ತು ಈ ಹುಲಿಯ ಡಿ.ಎನ್.ಎ. ಎರಡನ್ನೂ ಪರಿಶೀಲಿಸಿ, ಸೆರೆ ಹಿಡಿಯಲಾದ ಹುಲಿ ಹೆಡಿಯಾಲ, ಮೊಳೆಯೂರು, ನುಗು ಸುತ್ತಮುತ್ತ ಜನರ ಅಮೂಲ್ಯ ಜೀವ ಹಾನಿ ಮಾಡಿದ ಹುಲಿಯೇ ಎಂಬುದನ್ನು ಅರಣ್ಯ ಇಲಾಖೆ ಅಧಿಕಾರಿಗಳು ಖಚಿತಪಡಿಸಿಕೊಳ್ಳಲಿದ್ದಾರೆ. ಬಂಡಿಪುರ ಮತ್ತು ನಾಗರಹೊಳೆಯ ಅರಣ್ಯದಂಚಿನಲ್ಲಿ ಹುಲಿಗಳು ಮನುಷ್ಯರ ಮೇಲೆ ಮತ್ತು ಜಾನುವಾರಗಳ ಮೇಲೆ ದಾಳಿ ಮಾಡುವ ಪ್ರಕರಣಗಳು ಹೆಚ್ಚಾಗಿದ್ದ ಹಿನ್ನೆಲೆಯಲ್ಲಿ ಬಂಡೀಪುರ ಮತ್ತು ನಾಗರಹೊಳೆಯ ಸಫಾರಿಯನ್ನು ಸ್ಥಗಿತಗೊಳಿಸಲಾಗಿತ್ತು. ಅಲ್ಲಿನ ಸಿಬ್ಬಂದಿಯನ್ನು ಹುಲಿಸೆರೆ ಕಾರ್ಯಾಚರಣೆಗೆ ನಿಯೋಜಿಸಲಾಗಿತ್ತು. ಈ ಹುಲಿಗೆ ಸುಮಾರು ೧೨-೧೩ ವರ್ಷ ವಯಸ್ಸಾಗಿದ್ದು, ಹಲ್ಲುಗಳು ಬಲಹೀನವಾಗಿವೆ. ಹೀಗಾಗಿ ಅರಣ್ಯದಲ್ಲಿ ಸಸ್ಯಹಾರಿ ವನ್ಯಜೀವಿಗಳ ಬೇಟೆ ಆಡಲು ಅಶಕ್ತವಾಗಿದ್ದ ಈ ಗಂಡು ಹುಲಿ, ಪಕ್ಕದ ಗ್ರಾಮಗಳಿಗೆ ನುಗ್ಗಿ ಜನ, ಜಾನುವಾರುಗಳ ಮೇಲೆ ದಾಳಿ ಮಾಡುತ್ತಿತ್ತು ಎಂದು ತಿಳಿದುಬಂದಿದೆ.

****************

ಕಳೆದ ಕೆಲ ದಿನಗಳಿಂದ ಕಬ್ಬಿನ ಬೆಲೆ ನಿಗದಿಗಾಗಿ ನಡೆಯುತ್ತಿರುವ ರೈತರ ಹೋರಾಟದ ಹಿನ್ನಲೆಯಲ್ಲಿ ಸರ್ಕಾರ ಹಾಗೂ ಕಾರ್ಖಾನೆಯ ಮಾಲೀಕರು ಪ್ರತಿಟನ್ ಗೆ ೩ ಸಾವಿರದ ೩೦೦ ನೀಡಲು ಬೆಳಗಾವಿ ಜಿಲ್ಲಾಡಳಿತ ನಿರ್ಧಾರ ಪ್ರಕಟಿಸಿದೆ. ಈ ನಿರ್ಧಾರದ ಬಗ್ಗೆ ಬೆಳಗಾವಿ ಜಿಲ್ಲೆಯ ಕೆಲ ಭಾಗಗಳಲ್ಲಿ ಸಂತೃಪ್ತ ವ್ಯಕ್ತವಾದರೆ, ಇನ್ನೂ ಕೆಲ ಪ್ರದೇಶಗಳಲ್ಲಿ ಅಸಮಾಧಾನ ಸ್ಫೋಟಗೊಂಡಿದೆ. ಜಿಲ್ಲೆಯ ಬೈಲಹೊಂಗಲ ತಾಲೂಕಿನ ರೈತರು ಸರ್ಕಾರದ ನಿರ್ಧಾರವನ್ನು ತಿರಸ್ಕರಿಸಿದ್ದು, ಬೈಲಹೊಂಗಲ ಪಟ್ಟಣವನ್ನು ಸಂಪೂರ್ಣ ಬಂದ್ ಮಾಡಿ ಪ್ರತಿಭಟನೆ ಮುಂದುವರಿಸಿದ್ದಾರೆ. ಅಗತ್ಯ ಸೇವೆಗಳನ್ನು ಹೊರತುಪಡಿಸಿ ಸಾರಿಗೆ ಸಂಚಾರ, ಅಂಗಡಿ ಮುಂಗಟ್ಟುಗಳು ಮತ್ತು ಬೀದಿ ವ್ಯಾಪಾರಿಗಳು ಬಂದ್ ಕರೆಗೆ ಸ್ಪಂದಿಸಿ ಬೆಂಬಲ ವ್ಯಕ್ತಪಡಿಸಿದ್ದಾರೆ. ಬೈಲಹೊಂಗಲ ಪ್ರದೇಶದಲ್ಲಿ ಬೆಳೆಯುವ ಕಬ್ಬಿನ ರಿಕವರಿ ಪ್ರಮಾಣ ಹೆಚ್ಚಿಗಿರುವುದರಿಂದ ಪ್ರತಿ ಟನ್‌ಗೆ ೩ ಸಾವಿರದ ೫೦೦ ರೂಪಾಯಿಗಳನ್ನು ನೀಡಬೇಕೆಂದು ಬೈಲಹೊಂಗಲ ಕಬ್ಬು ಬೆಳೆಗಾರರು ಆಗ್ರಹಿಸಿದ್ದಾರೆ.

****************

ಪರಪ್ಪನ ಅಗ್ರಹಾರ ಜೈಲಿನಲ್ಲಿ ಕೈದಿಗಳಿಗೆ ರಾಜಾತೀಥ್ಯ ನೀಡಿರುವ ಬಗ್ಗೆ ಸರ್ಕಾರದ ವಿರುದ್ಧ ಬಿಜೆಪಿ ಆಕ್ರೋಶ ವ್ಯಕ್ತಪಡಿಸಿದೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಈ ಅಭದ್ರ ಸರ್ಕಾರದಲ್ಲಿ ಮುಖ್ಯಮಂತ್ರಿಗಳಿಗೆ ಸರ್ಕಾರದ ಮೇಲೆ ಹಿಡಿತವಿಲ್ಲ. ಮಂತ್ರಿಗಳಿಗೆ ಅಧಿಕಾರಿಗಳ ಮೇಲೆ ಹಿಡಿತವಿಲ್ಲ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಆರೋಪಿಸಿದ್ದಾರೆ. ಭಯೋತ್ಪಾದಕರಿಗೆ, ಖೈದಿಗಳಿಗೆ, ಜೈಲಿನ ನಿಯಮಗಳನ್ನು

ಗಾಳಿಗೆ ತೂರಿ, ಮೊಬೈಲ್, ಇಂಟರ್‌ನೆಟ್ ನೀಡುತ್ತಿರುವುದು ಐಷಾರಾಮಿ ಜೀವನ ಗ್ಯಾರಂಟಿ ಎಂದು ವ್ಯಂಗ್ಯವಾಡಿದ್ದಾರೆ.

***************

ಪ್ರಸಕ್ತ ಸಾಲಿನ ಅಕ್ಕ ಪಡೆ ಯೋಜನೆ ಅನುಷ್ಠಾನಕ್ಕೆ ಎನ್‌ಸಿಸಿಯಲ್ಲಿ 'ಅ' ಪ್ರಮಾಣ ಪತ್ರ ಪಡೆದಿರುವ ಮಹಿಳಾ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ತಿಪ್ಪಣ್ಣ ಶಿರಸಿ ತಿಳಿಸಿದ್ದಾರೆ. ಅಪಾಯ, ಸಂಕಷ್ಟದಲ್ಲಿರುವ ಮಹಿಳೆಯರ ಮತ್ತು ಮಕ್ಕಳ ರಕ್ಷಣೆ ನೀಡಲು ಅಕ್ಕ ಪಡೆ ಜಾರಿಗೆ ತರಲಾಗಿದೆ. ಗುತ್ತಿಗೆ ಆಧಾರದ ಮೇಲೆ ಕಾರ್ಯನಿರ್ವಹಿಸಲು ಆಸಕ್ತರು ದೈಹಿಕ ಸದೃಢತೆ ಹೊಂದಿರಬೇಕು. ಪಾಳಿಯಲ್ಲಿ ಕೆಲಸ ನಿರ್ವಹಿಸಲು ಸಿದ್ಧರಿರುವ ೩೫ರಿಂದ ೪೫ ವರ್ಷ ಒಳಗಿರುವ ಮಹಿಳಾ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಗುತ್ತಿಗೆ ಅವಧಿ ೧೧ ತಿಂಗಳಿಗೆ ಸೀಮಿತವಾಗಿದ್ದು, ತೃಪ್ತಿಕರ ಆಗಿದ್ದಲ್ಲಿ ಮುಂದುವರಿಸಲಾಗುವುದು ಎಂದು ಪ್ರಕಟಣೆಯಲ್ಲಿ ಹೇಳಿದ್ದಾರೆ.

***************

ಸರ್ದಾರ್ ವಲ್ಲಭಭಾಯಿ ಪಟೇಲ್ ಅವರ ೧೫೦ನೇ ಜನ್ಮ ದಿನಾಚರಣೆಯ ಅಂಗವಾಗಿ ಬೆಂಗಳೂರು ಗ್ರಾಮಾಂತರ ಜಿಲ್ಲಾ ಮಟ್ಟದಲ್ಲಿ ರಾಷ್ಟ್ರೀಯ ಏಕತಾ ಪಾದಯಾತ್ರೆ ಕಾರ್ಯಕ್ರಮವನ್ನು ಇದೇ ೧೫ ರಂದು ದೊಡ್ಡಬಳ್ಳಾಪುರದಲ್ಲಿ ಆಯೋಜಿಸಲಾಗುವುದು ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ. ಯುವಕರಲ್ಲಿ ಏಕತೆಯ ಮನೋಭಾವವನ್ನು ಬಲಪಡಿಸಲು ಏಕತಾ ಪಾದಯಾತ್ರೆ ವಿನ್ಯಾಸಗೊಳಿಸಲಾಗಿದೆ.

***************